# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **472** |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.07.2024 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ ನಂತರದ ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಲು, ಬೇಡಿಕೆ ಮತ್ತು ಹಂಚಿಕೆಯನ್ನು ಸರಿದೂಗಿಸುವ ಉದ್ದೇಶದಿಂದ ಇ-ಆಡಳಿತ ಇಲಾಖೆಯ ವತಿಯಿಂದ ಎಸ್.ಎಚ್.ಪಿ (State Hostel Portal-SHP) ತಂತ್ರಾಂಶದ ಮೂಲಕ ಪ್ರವೇಶ ಪ್ರಕ್ರಿಯೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಎಸ್.ಎಚ್.ಪಿ ಪೋರ್ಟಲ್‌ನ ಕೆಲವೊಂದು ತಾಂತ್ರಿಕ ಸಮಸ್ಯೆಗಳಿಂದ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯಲ್ಲಿ ವಿಳಂಬವಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳು ಪ್ರಾರಂಭವಾಗಿ 15 ದಿನಕಳೆದಿದ್ದರೂ, ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆ ಇನ್ನೂ ನೆನೆಗುದಿಗೆ ಬಿದ್ದಿರಲು ಕಾರಣಗಳೇನು: | |
| ಇ) | ಶೈಕ್ಷಣಿಕ ವರ್ಷ ಆರಂಭಗೊಂಡು, ತರಗತಿಗಳು ಈಗಾಗಲೇ ಪ್ರಾರಂಭವಾಗಿದ್ದರೂ ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸದಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ಮಾರಕವಾಗುವುದನ್ನು ತಪ್ಪಿಸಲು ಸರ್ಕಾರ ಸಕಾಲದಲ್ಲಿ ಕ್ರಮವಹಿಸಿಲ್ಲದಿರುವುದಕ್ಕೆ ಕಾರಣಗಳೇನು: | 2024-25ನೇ ಸಾಲಿನಿಂದ ಪರಿಷ್ಕೃತ ಪ್ರವೇಶಾತಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ವಿದ್ಯಾರ್ಥಿನಿಲಯಗಳಲ್ಲಿ ಶೇ.50ರಷ್ಟು ಸ್ಥಾನಗಳನ್ನು ಸ್ಥಳೀಯ ವಿದ್ಯಾರ್ಥಿಗಳಿಗೆ ಮೀಸಲಿರಿಸಿ ಎಸ್.ಎಚ್.ಪಿ ಮುಖಾಂತರ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸಿ ನಂತರ ತಾಲ್ಲೂಕು ಮಟ್ಟದಲ್ಲಿ ಆಯ್ಕೆ ಸಮಿತಿಯ ಮೂಲಕ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |
| ಈ) | ಯಾವ ಕಾಲಮಿತಿಯೊಳಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್ ಗಳ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಅರ್ಹ ವಿದ್ಯಾರ್ಥಿಗಳಿಗೆ ಸೌಲಭ್ಯ ಕಲ್ಪಿಸಲಾಗುವುದು? | ಅದರಂತೆ, 2024-25ನೇ ಸಾಲಿನಲ್ಲಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ನವೀಕರಣ ವಿದ್ಯಾರ್ಥಿಗಳಿಗೆ ಈಗಾಗಲೇ ಪ್ರವೇಶಾತಿ ಕಲ್ಪಿಸಲಾಗಿರುತ್ತದೆ. ಹೊಸ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಂಬಂಧ ಅರ್ಜಿ ಆಹ್ವಾನ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

| | | |
|---|---|---|
| | | ಮೆಟ್ರಿಕ್-ನಂತರದ (ಪಿ.ಯು.ಸಿ ಮತ್ತು ಪಿ.ಯು.ಸಿ ಸಮನಾಂತರ ಕೋರ್ಸ್) ವಿದ್ಯಾರ್ಥಿನಿಲಯಗಳ ಪ್ರವೇಶಾತಿಗಾಗಿ ಎಸ್.ಎಚ್.ಪಿ ಮುಖಾಂತರ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ದಿನಾಂಕ:20.07.2024 ಕೊನೆಯ ದಿನಾಂಕವಾಗಿರುತ್ತದೆ.<br><br>ಇಲಾಖೆಯ ವಿದ್ಯಾರ್ಥಿನಿಲಯಗಳ ಪ್ರವೇಶಾತಿ ಪ್ರಕ್ರಿಯೆಯು ಹಂತ ಹಂತವಾಗಿ ಕೈಗೊಳ್ಳಲಾಗುವುದರಿಂದ, ಮೆಟ್ರಿಕ್-ಪೂರ್ವ, ಮೆಟ್ರಿಕ್-ನಂತರ (ಪಿ.ಯು.ಸಿ ಮತ್ತು ಪಿ.ಯು.ಸಿ ಸಮನಾಂತರ ಕೋರ್ಸ್), ಪದವಿ ಹಾಗೂ ಸ್ನಾತಕೋತ್ತರ ಮತ್ತು ಮೆಡಿಕಲ್ & ಇಂಜಿನಿಯರಿಂಗ್ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸಿ ನಿಗಧಿತ ಸಮಯಕ್ಕೆ ಪ್ರವೇಶ ಪ್ರಕ್ರಿಯೆಯನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಹಿಂವಕ 512 ಬಿಎಂಎಸ್ 2024**

**(ಶಿವರಾಜ್ ಎಸ್ ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು